ಗುರುವಾರ 22.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 123
Digital Varthe Kannada Daily
Volume 01 - Issue 123
Thursday , 22.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಅನ್ಯಾಯ ಪ್ರಶ್ನಿಸಿದ ಯುವಕನನ್ನು ಅಟ್ಟಾಡಿಸಿ ಕೊಂದ ದುಷ್ಕರ್ಮಿಗಳು



**ಬೆಂಗಳೂರು**: ಸಾಂಸ್ಕೃತಿಕ ರಾಜಧಾನಿ ಮೈಸೂರಿನಲ್ಲಿ ಮಧ್ಯರಾತ್ರಿ ಮತ್ತೊಂದು ಕೊಲೆಯಾಗಿದೆ ಅಂಗಡಿ ಮುಂದೆ ಕುಳಿತಿದ್ದ ಯುವಕನನ್ನು ಚಾಕು, ಲಾಂಗುಗಳನ್ನು ಹಿಡಿದು ಅಟ್ಟಾಡಿಸಿ ಬರ್ಬರವಾಗಿ ಕೊಲೆ ಮಾಡಲಾಗಿದೆ. ಮೈಸೂರು ಉದಯಗಿರಿ ಬೀಡಿ ಕಾಲೋನಿ ಬಳಿ 26 ವರ್ಷದ ಶಹಬಾಜ ಎಂಬ ಯುವಕನನ್ನು ಅದೇ ಏರಿಯಾದ ಜುಬೇರ್ ಎಂಬಾತ ತನ್ನ ಸ್ನೇಹಿತರ ಜೊತೆ ಸೇರಿ ಕೊಲೆ ಮಾಡಿದ್ದಾನೆ ಎಂದು ತಿಳಿದುಬಂದಿದೆ. ಫೈನಾನ್ಸ್ ಹಾವಳಿ ತಡೆಯಲು ಮುಂದಾಗಿದ್ದೆ ಶಹಬಾಜ್ ಕೊಲೆ ಕಾರಣ ಎನ್ನಲಾಗಿದೆ.

ರಾತ್ರಿ1 ಗಂಟೆ ವೇಳೆ ಅಂಗಡಿ ಮುಚ್ಚಿ ಕುಳಿತಿದ್ದ ಶಹಬಾಜ್ ಮೇಲೆ ಏಕಾಏಕಿ ದಾಳಿ ಮಾಡಿ ತಲೆ, ಎದೆ, ಕತ್ತು, ಹೊಟ್ಟೆಗೆ ಹೀಗೆ ಸಿಕ್ಕ ಸಿಕ್ಕ ಕಡೆ ಚುಚ್ಚಿ ಕೊಲೆ ಮಾಡಿ ಪರಾರಿಯಾಗಿದ್ದಾರೆ. ಹಳೆ ವೈಷಮ್ಯದಿಂದ ಅಟ್ಯಾಕ್ ಮಾಡಿ ಕೊಲೆ ಮಾಡಿದ್ದಾರೆ ಎಂದು ಮೇಲ್ನೋಟಕ್ಕೆ ಗೊತ್ತಾಗಿದೆ.

**ಶ್ವಾನ ದಳ ದೌಡು**:ಕೊಲೆಯಾದ ಯುವಕ ಹಾಗೂ ಕೊಲೆ ಮಾಡಿದ ಆರೋಪಿಗಳು ಒಂದೇ ಏರಿಯಾದವರು. ಶಹಬಾಜ್ ಗೌಸಿಯಾ ನಗರದಲ್ಲಿ ವೆಲ್ಡಿಂಗ್ ಶಾಪ್ ಇಟ್ಟುಕೊಂಡಿದ್ದ. ಏರಿಯಾದಲ್ಲಿ ಫೈನಾನ್ಸ್ ಹಾವಳಿ ಜಾಸ್ತಿಯಾಗಿತ್ತು. ಜುಬೇರ್ ಹಾಗೂ ಅತನ ಸ್ನೇಹಿತರು ಫೈನ್ಯಾನ್ಸ್ ಹೆಸರಿನಲ್ಲಿ ಮೀಟರ್ ಬಡ್ಡಿ ವಸೂಲಿ ಮಾಡುತ್ತಿದ್ದರಂತೆ. ಅವರ ವಿರುದ್ಧ ಶಹಬಾನ್ ನಿಂತಿದ್ದ. ಪೊಲೀಸರಿಗೆ ದೂರು ಸಹ ಕೊಡಿಸಿದ್ದನಂತೆ. ಇದೇ ಕಾರಣಕ್ಕೆ ನಾಲ್ಕು ತಿಂಗಳ ಹಿಂದೆ ಶಹಬಾಜ್ ಅಂಗಡಿ ಮುಂದೆ ಇವರು ಬಂದು ಗಲಾಟೆ ಮಾಡಿದ್ದರು.

ಇನ್ನು ಒದರ ಜೊತೆಗೆ ಶಹಬಾಜ್ ಮನೆ ಪಕ್ಕ ಖಾಲಿ ಜಾಗದಲ್ಲಿ ಆಟೋಗಳನ್ನು ನಿಲ್ಲಿಸುತ್ತಿದ್ದರು. ಒಂದು ಆಟೋಕ್ಕೆ ದಿನಕ್ಕೆ 20 ರೂಪಾಯಿ ಕಲೆಕ್ಟ್ ಮಾಡಲಾಗುತಿತ್ತು. ಈ ವಿಚಾರಕ್ಕೂ ಗಲಾಟೆ ಆಗಿತ್ತಂತೆ. ಈ ಹಿನ್ನೆಲೆಯಲ್ಲಿ ಕೊಲೆ ನಡೆದಿರಬಹುದು ಎಂಬ ಮಾಹಿತಿ ಲಭ್ಯವಾಗಿದೆ.

ಸದ್ಯ ಮೈಸೂರಿನ ಉದಯಗಿರಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ತನಿಖೆ ನಂತರವಷ್ಟೇ ಕೊಲೆಗೆ ನಿಖರ ಕಾರಣ ತಿಳಿದು ಬರಲಿದೆ.

## ಸಂಸದ ಬಿ.ವೈ ರಾಘವೇಂದ್ರ ಕಾರು ಭೀಕರ ಅಪಘಾತ



**ಶಿವಮೊಗ್ಗ**: ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಪುತ್ರ ಹಾಗೂ ಶಿವಮೊಗ್ಗ ಲೋಕಸಭಾ ಕ್ಷೇತ್ರದ ಸಂಸದ ಬಿ.ವೈ. ರಾಘವೇಂದ್ರ ಅವರು ಪ್ರಯಾಣಿಸುತ್ತಿದ್ದ ಕಾರು ಭೀಕರ ಅಪಘಾತಕ್ಕೀಡಾದ ಘಟನೆ ಶಿವಮೊಗ್ಗ ಜಿಲ್ಲೆಯ ಕುಂಚೇನಹಳ್ಳಿ ಗ್ರಾಮದ ಸಮೀಪ ಸೋಮವಾರ ನಡೆದಿದೆ. ಈ ಅಪಘಾತದಲ್ಲಿ ಸಂಸದರು ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದು, ಅವರಿಗೆ ಹಾಗೂ ಕಾರಿನಲ್ಲಿದ್ದ ಸಿಬ್ಬಂದಿಗೆ ಸಣ್ಣ ಪ್ರಮಾಣದ ಗಾಯಗಳಾಗಿವೆ ಎಂದು ತಿಳಿದುಬಂದಿದೆ.

ಸಂಸದ ಬಿ.ವೈ. ರಾಘವೇಂದ್ರ ಅವರು ತಮ್ಮ ನಿಗದಿತ ದೈನಂದಿನ ಕಾರ್ಯಕ್ರಮಗಳು ಹಾಗೂ ಕ್ಷೇತ್ರದ ಕಾರ್ಯನಿಮಿತ್ತ ಕುಂಚೇನಹಳ್ಳಿ ಗ್ರಾಮ ಮಾರ್ಗವಾಗಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದರು. ಈ ವೇಳೆ ಹಿಂಬದಿಯಿಂದ ಅತೀವೇಗದಲ್ಲಿ ಬರುತ್ತಿದ್ದ ಬೊಲೆರೋ ವಾಹನದ ಚಾಲಕ ವಾಹನದ ಮೇಲಿನ ನಿಯಂತ್ರಣ ಕಳೆದುಕೊಂಡು ಸಂಸದರ ಕಾರಿಗೆ ಡಿಕ್ಕಿ ಹೊಡೆದಿದ್ದಾನೆ ಎನ್ನಲಾಗಿದೆ. ಡಿಕ್ಕಿಯ ರಭಸಕ್ಕೆ ಸಂಸದರ ಕಾರಿನ ಹಿಂಭಾಗ ಸಂಪೂರ್ಣವಾಗಿ ಜಖಂಗೊಂಡಿದ್ದು, ಹಿಂಬದಿ ಲೈಟ್‌ಗಳು, ಡಿಕ್ಕಿ ಭಾಗ ಹಾಗೂ ಬಾಡಿಯ ಕೆಲವು ಭಾಗಗಳು ನುಜ್ಜುಗುಜ್ಜಾಗಿವೆ.

ಅಪಘಾತದ ಸಂದರ್ಭದಲ್ಲಿ ಕಾರಿನೊಳಗಿದ್ದ ಸಂಸದ ಬಿ.ವೈ. ರಾಘವೇಂದ್ರ ಅವರಿಗೆ ಸಣ್ಣ ಪ್ರಮಾಣದ ಗಾಯಗಳಾಗಿದ್ದು, ತಕ್ಷಣವೇ ಸ್ಥಳೀಯ ನಾಗರಿಕರು ಮತ್ತು ಪೊಲೀಸರು ಧಾವಿಸಿ ರಕ್ಷಣಾ ಕಾರ್ಯ ಕೈಗೊಂಡರು. ಕಾರಿನಲ್ಲಿ ಸಂಸದರೊಂದಿಗೆ ಪ್ರಯಾಣಿಸುತ್ತಿದ್ದ ಸಿಬ್ಬಂದಿಗೂ ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿದುಬಂದಿದೆ. ಆದರೆ ಯಾವುದೇ ಗಂಭೀರ ಗಾಯಗಳು ಸಂಭವಿಸದೆ ಇರುವುದರಿಂದ ಎಲ್ಲರೂ ನಿಟ್ಟುಸಿರು ಬಿಟ್ಟಿದ್ದಾರೆ.

ಘಟನೆ ನಡೆದ ಕೆಲವೇ ನಿಮಿಷಗಳಲ್ಲಿ ಸ್ಥಳಕ್ಕೆ ಪೊಲೀಸರು ಆಗಮಿಸಿ ಅಪಘಾತ ಸ್ಥಳವನ್ನು ಪರಿಶೀಲನೆ ನಡೆಸಿದರು. ಅಪಘಾತಕ್ಕೆ ಕಾರಣವಾದ ಬೊಲೆರೋ ವಾಹನವನ್ನು ವಶಕ್ಕೆ ಪಡೆದು, ಅದರ ಚಾಲಕನ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಲಾಗಿದೆ. ಅಪಘಾತಕ್ಕೆ ಅತೀವೇಗ ಹಾಗೂ ನಿರ್ಲಕ್ಷ್ಯ ಚಾಲನೆಯೇ ಕಾರಣವಾಗಿರಬಹುದು ಎಂದು ಪ್ರಾಥಮಿಕ ತನಿಖೆಯಲ್ಲಿ ಶಂಕಿಸಲಾಗಿದೆ.

ಘಟನೆಯ ನಂತರ ಮುನ್ನೆಚ್ಚರಿಕಾ ಕ್ರಮವಾಗಿ ಸಂಸದ ಬಿ.ವೈ. ರಾಘವೇಂದ್ರ ಅವರನ್ನು ಸಮೀಪದ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಅಲ್ಲಿ ವೈದ್ಯರು ಪ್ರಾಥಮಿಕ ಚಿಕಿತ್ಸೆ ನೀಡಿದ್ದಾರೆ. ವೈದ್ಯರು ಸಂಸದರಿಗೆ ಯಾವುದೇ ಗಂಭೀರ ಅಪಾಯವಿಲ್ಲ, ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಈ ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಬಿಜೆಪಿ ಕಾರ್ಯಕರ್ತರು, ಬೆಂಬಲಿಗರು ಹಾಗೂ ಸ್ಥಳೀಯ ಮುಖಂಡರು ಆಸ್ಪತ್ರೆಗೆ ಆಗಮಿಸಿ ಸಂಸದರ ಆರೋಗ್ಯ ವಿಚಾರಿಸಿದರು. ಸಂಸದರು ಸುರಕ್ಷಿತವಾಗಿರುವುದರಿಂದ ಎಲ್ಲೆಡೆ ನಿರಾಳ ವಾತಾವರಣ ನಿರ್ಮಾಣವಾಗಿದೆ.




## ನಡು ರಸ್ತೆಯಲ್ಲಿ ರೌಡಿಶೀಟರ್ ಕೊಲೆ: ಎಂಟು ಜನರ ಬಂಧನ



**ಬೆಂಗಳೂರು**:ಬಂಡೆಪಾಳ್ಯ ಠಾಣಾ ವ್ಯಾಪ್ತಿಯ ಮಂಗಮ್ಮನ ಪಾಳ್ಯದಲ್ಲಿ ಹಳೇ ದ್ವೇಷದ ಹಿನ್ನಲೆ ನಟೋರಿಯಸ್ ರೌಡಿಶೀಟರ್ ಮೊಹಮ್ಮದ್ ಶಬ್ಬೀರ್‌ನ ವೈರಿಗಳು ಅಟ್ಟಾಡಿಸಿ ಕೊಚ್ಚಿ ಕೊಲೆ ಮಾಡಿದ್ದ ಪ್ರಕರಣ ಸಂಬಂಧ ಬರೋಬ್ಬರಿ 8 ಮಂದಿ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಕೋರಮಂಗಲ ಠಾಣಾ ವ್ಯಾಪ್ತಿಯ ರೌಡಿ ಶೀಟರ್ ಆಗಿರುವ ಮಂಗಮ್ಮನಪಾಳ್ಯ ನಿವಾಸಿ ಮೊಹಮ್ಮದ್ ಶಬ್ಬೀರ್ ಮತ್ತು ಐವರು ರಾತ್ರಿ ತಮ್ಮ ಸ್ನೇಹಿತನ್ನ ಮಾತಾಡಿಸಿ ಆಟೋದಲ್ಲಿ ವಾಪಸ್ ಆಗುತ್ತಿದ್ದ ಸಂದರ್ಭ ದಾಳಿ ನಡೆಸಿದ್ದ ಆರೋಪಿಗಳು ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದರು.

**ಶಬ್ಬೀರ್ ಕಾಟ ತಾಳಲಾರದೆ ಮರ್ಡರ್**:ನೂರುಲ್ಲ, ನದೀಮ್, ಸಲ್ಮಾನ್ ಖಾನ್, ಮೊಹಮ್ಮದ್ ಅಲಿ, ಸೈಯದ್ ಇಸ್ಮಾಯಿಲ್, ಮೊಹಮ್ಮದ್ ಸಿದ್ದಿಕ್, ಸೈಯದ್ ಕಲೀಂ, ಉಮ್ರೇಜ್ ಬಂಧಿತ ಆರೋಪಿಗಳಾಗಿದ್ದು, ಹಳೆ ವೈಷ್ಯಮ್ಯ ಮತ್ತು ಹವಾ ಮಾಡೋ ವಿಚಾರಕ್ಕೆ ಶಬ್ಬೀರನನ್ನ ಕೊಲೆ ಮಾಡಿದ್ದಾಗಿ ಒಪ್ಪಿಕೊಂಡಿದ್ದಾರೆ. ಮೊದಲೇ ರೌಡಿ ಶೀಟರ್ ಆಗಿದ್ದ ಶಬ್ಬೀರ್ ಹಾವಳಿ ಏರಿಯಾದಲ್ಲಿ ಹೆಚ್ಚಾಗಿತ್ತು. ಇಡೀ ಏರಿಯಾದಲ್ಲಿ ಯಾರೂ ಶಬ್ಬೀರ್‌ನ ಮಾತು ಮೀರುವಂತಿರಲಿಲ್ಲ. ಯಾರೇ ರೌಡಿಸಂ ಮಾಡಿದ್ರೂ ಮೊದಲು ಶಬ್ಬೀರ್‌ಗೆ ವಿಚಾರ ಹೇಳಬೇಕಿತ್ತು. ಆತನ ಬಿಟ್ಟು ಯಾವುದೇ ವ್ಯವಹಾರ ಮಾಡುವಂತಿರಲಿಲ್ಲ. ಯಾರಾದ್ರೂ ತಾನು ಮಾಡ್ತಿದ್ದ ಬ್ಯುಸಿನೆಸ್ ಮಾಡಿದ್ರೆ, ಹಫ್ತಾ ವಸೂಲಿ, ಸೆಟ್ಲಮೆಂಟ್ ಮಾಡಿದ್ರೆ ಗರಂ ಆಗ್ತಿದ್ದ. ಕೂಡಲೇ ಅವರನ್ನು ಕರೆಸಿ ಬೆದರಿಕೆ ಹಾಕಿ ಹಲ್ಲೆ ಮಾಡ್ತಿದ್ದ. ಇಂತಹುದ್ದೇ ಕಾರಣದಿಂದ ಸುಮಾರು 10-15 ಜನ ಶಬ್ಬೀರ್‌ನಿಂದ ಹಲ್ಲೆಗೊಳಗಾಗಿದ್ರು. ಹೀಗಾಗಿ ಶಬ್ಬೀರ್ ಇದ್ರೆ ನಮ್ಮ ವ್ಯವಹಾರಗಳು ನಡೆಯಲ್ಲ, ನಮ್ಮ ಜೀವಕ್ಕೆ ಅಪಾಯ ಎಂದು ಎಲ್ಲ ಸೇರಿ ಆತನ ಕತೆಯನ್ನೇ ಮುಗಿಸಿದ್ದಾರೆ ಎಂಬುದು ತನಿಖೆ ವೇಳೆ ಗೊತ್ತಾಗಿದೆ.

**ಎರಡು ಬಾರಿ ಫೇಲ್ ಆಗಿತ್ತು ಆರೋಪಿಗಳ ಪ್ಲ್ಯಾನ್**:ಇನ್ನು ಆರೋಪಿಗಳು ಈ ಹಿಂದೆಯೂ ಎರಡೆರಡು ಬಾರಿ ಶಬ್ಬೀರ್‌ನ ಮುಗಿಸಲೇ ಬೇಕು ಎಂದು ಹೊಂಚು ಹಾಕಿದ್ದರು. ಆದರೆ ಆತನ ಮೇಲಿನ ಭಯ ಇವರನ್ನು ಕೃತ್ಯದಿಂದ ಹಿಂದೆ ಸರಿಯುವಂತೆ ಮಾಡಿತ್ತು. ಅದಾದ ಬಳಿಕ ಮತ್ತೆ ಮೂರನೇ ಬಾರಿಗೆ ಸ್ಕೆಚ್ ಹಾಕಿದ್ದ ಗ್ಯಾಂಗ್, ಪಕ್ಕಾ ಪ್ಲ್ಯಾನ್ ಮಾಡಿ ಆಟೋದಲ್ಲಿ ಬರ್ತಿದ್ದ ಶಬ್ಬೀರ್ ಅಡ್ಡಗಟ್ಟಿ ಮನಸೋ ಇಚ್ಛೆ ಕೊಚ್ಚಿ ಕೊಲೆ ಮಾಡಿ ಎಸ್ಕೇಪ್ ಆಗಿತ್ತು. ಪ್ರಕರಣ ಸಂಬಂಧ ಈಗಾಗಲೇ ಹಲವರನ್ನು ಬಂಧಿಸಿರುವ ಪೊಲೀಸರು, ಇನ್ನೂ ಕೆಲವರಿಗೆ ಹುಡುಕಾಟ ನಡೆಸುತ್ತಿದ್ದಾರೆ ಎನ್ನಲಾಗಿದೆ.

## ಜಾತ್ಯಾತೀತ ಪರಿಕಲ್ಪನೆಯನ್ನು ನಿಜವಾಗಿಸಿದ ಕ್ರಾಂತಿಯೋಗಿ ಸಿದ್ದಗಂಗಾ ಶ್ರೀಗಳು: ವೈ.ಬಿ.ಎಚ್ ಜಯದೇವ್



**ಪೀಣ್ಯ ದಾಸರಹಳ್ಳಿ**: ವಿಶ್ವದಲ್ಲೇ ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲಿ ಅಪೂರ್ವ ದಾಖಲೆ ನಿರ್ಮಿಸಿ ಮಾನವೀಯತೆಯ ಹೊಸ ದಾರಿಯನ್ನು ತೋರಿದ ಮಹಾನ್ ವ್ಯಕ್ತಿತ್ವ ಸಿದ್ದಗಂಗಾ ಮಠದ ಸಿದ್ದಗಂಗಾ ಶ್ರೀ ಶಿವಕುಮಾರ ಸ್ವಾಮೀಜಿ ಎಂದು ಸಾಹಿತಿ ಹಾಗೂ ದಾಸರಹಳ್ಳಿ ಕ್ಷೇತ್ರ ಘಟಕದ ಕನ್ನಡ ಜಾನಪದ ಅಧ್ಯಕ್ಷ ವೈ.ಬಿ.ಎಚ್. ಜಯದೇವ್ ಅವರು ಹೇಳಿದರು. ಅನ್ನ, ಅರಿವು ಮತ್ತು ಜ್ಞಾನ ದಾಸೋಹದ ಮೂಲಕ ಜಾತ್ಯಾತೀತ ಪರಿಕಲ್ಪನೆಯನ್ನು ಕೇವಲ ಮಾತಿನಲ್ಲಿ ಅಲ್ಲ, ಬದುಕಿನಲ್ಲಿ ನಿಜವಾಗಿಸಿದ ಕ್ರಾಂತಿಯೋಗಿಗಳು ಸಿದ್ದಗಂಗಾ ಶ್ರೀಗಳು ಎಂದು ಅವರು ಅಭಿಪ್ರಾಯಪಟ್ಟರು.

ಭುವನೇಶ್ವರಿ ನಗರದಲ್ಲಿ ಕಾಯಕ ಯೋಗಿ ಸಹಕಾರ ಸಂಘದ ವತಿಯಿಂದ ಆಯೋಜಿಸಲಾದ ಶಿವಕುಮಾರ ಶ್ರೀಗಳ ಪುಣ್ಯಸ್ಮರಣೆಯ ದಿನವನ್ನು 'ದಾಸೋಹ ದಿನ'ವಾಗಿ ಆಚರಿಸಿ ಮಾತನಾಡಿದ ಅವರು, ಸಿದ್ದಗಂಗಾ ಶ್ರೀಗಳ ಜೀವನವೇ ಮಾನವೀಯತೆಯ ಮಹಾಕಾವ್ಯ ಎಂದು ಬಣ್ಣಿಸಿದರು. ಜಾತಿ, ಧರ್ಮ, ವರ್ಗ ಎಂಬ ಎಲ್ಲ ಬೇಧಗಳನ್ನು ಮೀರಿ ಸರ್ವಜನಾಂಗದ ಮಕ್ಕಳಿಗೆ ಶಿಕ್ಷಣ ನೀಡಿದ ಅವರ ಸೇವೆ ಇಂದಿನ ಸಮಾಜಕ್ಕೆ ದಾರಿ ದೀಪವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಎಸ್. ಮುನಿರಾಜು, ಸಿದ್ದಗಂಗಾ ಶ್ರೀ ಶಿವಕುಮಾರ ಸ್ವಾಮೀಜಿಯವರು ಸರ್ವಜನಾಂಗದ ವಿದ್ಯಾರ್ಥಿಗಳಿಗೆ ಆಶ್ರಯ, ಅನ್ನದಾಸೋಹ ಹಾಗೂ ಶಿಕ್ಷಣ ನೀಡಿ ಲಕ್ಷಾಂತರ ಜನರ ಬದುಕಿಗೆ ಬೆಳಕು ನೀಡಿದವರು ಎಂದರು. ಅವರ ಆದರ್ಶಗಳು, ತತ್ವಗಳು ಮತ್ತು ಸಿದ್ಧಾಂತಗಳ ಹಾದಿಯಲ್ಲಿ ನಾವೆಲ್ಲರೂ ನಡೆಯಬೇಕಿದೆ. ಅಂಥ ಮಹಾನ್ ಚೇತನವನ್ನು ಸದಾ ಸ್ಮರಿಸುವುದು ನಮ್ಮ ಕರ್ತವ್ಯ ಎಂದು ಹೇಳಿದರು.

ಕಾಯಕಯೋಗಿ ಸಹಕಾರ ಸಂಘದ ಅಧ್ಯಕ್ಷ ಬಸವರಾಜಣ್ಣ ಮಾತನಾಡಿ, ಸರ್ಕಾರ ಮಾಡಬೇಕಾದ ಅನೇಕ ಸಮಾಜಮುಖಿ ಕೆಲಸಗಳನ್ನು ಇಂದು ಸಂಘ-ಸಂಸ್ಥೆಗಳು ಮಾಡುತ್ತಿವೆ. ಸಿದ್ದಗಂಗಾ ಶ್ರೀಗಳ ಪುಣ್ಯಸ್ಮರಣೆಯನ್ನು 'ದಾಸೋಹ ದಿನ'ವಾಗಿ ಎಲ್ಲೆಡೆ ಆಚರಿಸುವುದು ಮಾನವೀಯತೆಯ ಧರ್ಮವಾಗಿದ್ದು, ಅದು ಸಮಾಜದಲ್ಲಿ ಸಹಬಾಳ್ವೆ ಮತ್ತು ಸಮಾನತೆಯ ಮೌಲ್ಯಗಳನ್ನು ಗಟ್ಟಿಗೊಳಿಸುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಾವಿರಾರು ಜನರಿಗೆ ಅನ್ನದಾಸೋಹ ಹಾಗೂ ಸಿಹಿ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷ ಬಿ.ಟಿ. ಸುರೇಶ್ ಸೇರಿದಂತೆ ಪದಾಧಿಕಾರಿಗಳಾದ ಸಿದ್ದಲಿಂಗಪ್ಪ (ಶ್ರೀ ಸಾಯಿ ಎಲೆಕ್ಟ್ರಿಕಲ್ಸ್), ಮೇಲೇಗೌಡ, ಎಂ. ಬಸವರಾಜು, ಮಂಜಣ್ಣ, ಪ್ರಕಾಶ್, ಶಿವಶಂಕರ್, ಟಿ.ಸಿ. ಶಿವಕುಮಾರ್, ಆರಾಧ್ಯ ಹಾಗೂ ಮಹಿಳಾ ಮುಖಂಡರಾದ ಕುಸುಮಾ, ಸವಿತಾ, ಸಿದ್ದಲಿಂಗಪ್ಪ ಆರಾಧ್ಯ ಸೇರಿದಂತೆ ಅನೇಕ ಸಾರ್ವಜನಿಕರು ಭಾಗವಹಿಸಿದ್ದರು.

ಕಾರ್ಯಕ್ರಮವು ಸಿದ್ದಗಂಗಾ ಶ್ರೀಗಳ ಮಾನವೀಯ ಚಿಂತನೆಗಳನ್ನು ಸ್ಮರಿಸಿ, ಸಮಾಜದಲ್ಲಿ ಜಾತ್ಯಾತೀತತೆ, ಸೇವೆ ಮತ್ತು ಸಹಾನುಭೂತಿಯ ಮೌಲ್ಯಗಳನ್ನು ಮತ್ತೊಮ್ಮೆ ಗಟ್ಟಿಯಾಗಿ ಪ್ರತಿಪಾದಿಸಿತು.

## ಶಿವಕುಮಾರ ಸ್ವಾಮೀಜಿಗಳ 7ನೇ ವರ್ಷದ ಪುಣ್ಯ ಸ್ಮರಣೆ



**ಕೃಷ್ಣರಾಜಪೇಟೆ**:ಪಟ್ಟಣದ ಟಿಬಿ ವೃತ್ತದಲ್ಲಿ ತ್ರಿವಿಧ ದಾಸೋಹಿ, ಕರ್ನಾಟಕ ರತ್ನ, ಸಿದ್ಧಗಂಗಾ ಮಠದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಶಿವಕುಮಾರ ಶಿವಯೋಗಿಗಳವರ 7ನೇ ವರ್ಷದ ಪುಣ್ಯ ಸ್ಮರಣೆಯ ಅಂಗವಾಗಿ, ತಾಲೂಕು ವೀರಶೈವ ಮಹಾಸಭಾ ಘಟಕದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಭವ್ಯ ಅನ್ನದಾಸೋಹ ಕಾರ್ಯಕ್ರಮವು ಭಕ್ತಿಪೂರ್ವಕವಾಗಿ ಜರುಗಿತು,

**ಶ್ರೀಗಳ ಭಾವಚಿತ್ರಕ್ಕೆ ಪುಷ್ಪನಮನ**: ಕಾಪನಹಳ್ಳಿ ಗವೀಮಠ ಶ್ರೀ ಸ್ವತಂತ್ರ ಚೆನ್ನವೀರ ಸ್ವಾಮೀಜಿ ಹಾಗೂ ತಾಲೂಕಿನ ಶಾಸಕರಾದ ಹೆಚ್.ಟಿ ಮಂಜುರವರು ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನಗಳನ್ನು ಸಲ್ಲಿಸಿದರು.

ನಂತರ ಮಾತನಾಡಿದ ಶಾಸಕ ಹೆಚ್.ಟಿ. ಮಂಜು ಶ್ರೀ ಸಿದ್ಧಗಂಗಾ ಶ್ರೀಗಳು ಹಾಕಿಕೊಟ್ಟ ದಾಸೋಹ ಪರಂಪರೆ ಇಡೀ ಜಗತ್ತಿಗೆ ಮಾದರಿಯಾಗಿದೆ. ಅವರ ತತ್ವಗಳನ್ನು ಪಾಲಿಸುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ, ಎಂದು ಸ್ಮರಿಸಿದರು.

**ಅನ್ನದಾಸೋಹಕ್ಕೆ ಚಾಲನೆ**: ಸಮಾಜ ಸೇವಕರಾದ ಆರ್.ಟಿ.ಓ. ಮಲ್ಲಿಕಾರ್ಜುನ್ ರವರ ಆಪ್ತ ಸಹಾಯಕ ಗಂಜಿಗೆರೆ ಮಹೇಶ್ ಅವರು ಅನ್ನದಾಸೋಹ ಕಾರ್ಯಕ್ರಮಕ್ಕೆ ಅಧಿಕೃತವಾಗಿ ಚಾಲನೆ ನೀಡಿದರು.

ನೂರಾರು ಭಕ್ತಾದಿಗಳು ಹಾಗೂ ಸಾರ್ವಜನಿಕರು ಶಿಸ್ತುಬದ್ಧವಾಗಿ ಅನ್ನಪ್ರಸಾದ ವನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ವೀರಶೈವ ಮಹಾಸಭಾ ಅಧ್ಯಕ್ಷರಾದ ಸುಜೇಂದ್ರಕುಮಾರ್, ಎಳನೀರು ವ್ಯಾಪಾರಿಗಳು ಮತ್ತು ಸಮಾಜ ಸೇವಕರಾದ ಭಾರತಿಪುರ ಪುಟ್ಟಣ್ಣ, ಮುಖಂಡರಾದ ಬ್ಯಾಂಕ್ ಪರಮೇಶ್, ತೋಟಪ್ಪಶೆಟ್ಟಿ, ಬಸವಲಿಂಗಪ್ಪ,ವಕೀಲ ಪುರ ಮಂಜುನಾಥ್, ಚೋಕನಹಳ್ಳಿ ಪ್ರಕಾಶ್, ಅಪ್ಪಾಜಿ, ಜಗದಾಂಬ, ಎಲ್.ಐ.ಸಿ.ಶಿವಪ್ಪ, ನಾಡ ಬೋಗನಹಳ್ಳಿ ಎಂ.ಎಸ್.ಈರಪ್ಪ, ಮೋದೂರು ಮಂಜುನಾಥ್, ಎಂ.ಎಸ್. ಶಿವಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

## ಸರಣಿ ಅಪಘಾತ: ಬೈಕ್ ಸವಾರ ಸ್ಥಳದಲ್ಲೇ ಸಾವು



**ನೆಲಮಂಗಲ**: ಬೆಂಗಳೂರು ಉತ್ತರ ತಾಲೂಕಿನ ಮಾಕಳಿ ಸಮೀಪ ಭೀಕರ ಸರಣಿ ಅಪಘಾತ ಸಂಭವಿಸಿ, ಬೈಕ್ ಸವಾರನೊಬ್ಬ ಸ್ಥಳದಲ್ಲೇ ದುರ್ಮರಣ ಹೊಂದಿದ ಘಟನೆ ಬುಧವಾರ ನಡೆದಿದೆ. ಅಪಘಾತದಲ್ಲಿ ಮತ್ತೊಬ್ಬ ಬೈಕ್ ಸವಾರ ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾನೆ. ಸೊಲ್ಲಾಪುರದಿಂದ ಈರುಳ್ಳಿ ತುಂಬಿಕೊಂಡು ಬರುತ್ತಿದ್ದ ಕ್ಯಾಂಟರ್ ಲಾರಿ, ಆಟೋ ಹಾಗೂ ಎರಡು ಬೈಕ್‌ಗಳ ನಡುವೆ ಅಪಘಾತ ಸಂಭವಿಸಿದೆ. ಪ್ರತ್ಯಕ್ಷದರ್ಶಿಗಳ ಮಾಹಿತಿ ಪ್ರಕಾರ, ರಸ್ತೆಯಲ್ಲಿ ಸಾಗುತ್ತಿದ್ದ ಆಟೋ ಸಡನ್ ಆಗಿ ಬ್ರೇಕ್ ಹಾಕಿದ್ದರಿಂದ ಹಿಂದೆ ಬರುತ್ತಿದ್ದ ಕ್ಯಾಂಟರ್ ಲಾರಿಗೆ ನಿಯಂತ್ರಣ ತಪ್ಪಿದೆ. ಪರಿಣಾಮವಾಗಿ ಲಾರಿ ಮೊದಲು ಆಟೋಗೆ ಡಿಕ್ಕಿ ಹೊಡೆದು, ಬಳಿಕ ಎದುರಿಗೆ ಬರುತ್ತಿದ್ದ ಬೈಕ್‌ಗಳ ಮೇಲೆ ಬಿದ್ದಿದೆ.

ಲಾರಿ ಬೈಕ್ ಮೇಲೆ ಉರುಳಿದ ಪರಿಣಾಮ ಒಬ್ಬ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಮತ್ತೊಬ್ಬ ಬೈಕ್ ಸವಾರನಿಗೆ ಗಂಭೀರ ಗಾಯಗಳಾಗಿದ್ದು, ತಕ್ಷಣವೇ ಆತನನ್ನು ಆಸ್ಪತ್ರೆಗೆ ರವಾನಿಸಲಾಗಿದೆ. ಅಪಘಾತದ ದೃಶ್ಯ ಅತ್ಯಂತ ಭೀಕರವಾಗಿದ್ದು, ರಸ್ತೆ ಮೇಲೆ ಈರುಳ್ಳಿ ಚೀಲಗಳು ಚೆಲ್ಲಾಪಿಲ್ಲಿಯಾಗಿವೆ.

**ಮೂಟೆಗಳಲ್ಲಿ ಈರುಳ್ಳಿ ತುಂಬ್ಕೊಂಡು ಹೋದ ಜನ**: ಅಚ್ಚರಿಯ ಸಂಗತಿ ಎಂದರೆ, ಅಪಘಾತದಲ್ಲಿ ವ್ಯಕ್ತಿಯೊಬ್ಬ ಮೃತಪಟ್ಟಿದ್ದರೂ ಸಹ, ರಸ್ತೆ ಮೇಲೆ ಬಿದ್ದಿದ್ದ ಈರುಳ್ಳಿಯನ್ನು ಹೊತ್ತುಕೊಂಡು ಹೋಗಲು ಜನರು ಮುಗಿಬಿದ್ದರು. ಜನರು ಈರುಳ್ಳಿಗಾಗಿ ಮುಗಿಬಿದ್ದ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿಯೂ ಹರಿದಾಡಿದ್ದು, ಸಾರ್ವಜನಿಕರಲ್ಲಿ ಆಕ್ರೋಶಕ್ಕೆ ಕಾರಣವಾಗಿವೆ. ಮಾನವೀಯತೆ ಮರೆತ ಈ ವರ್ತನೆ ವ್ಯಾಪಕ ಟೀಕೆಗೆ ಗುರಿಯಾಗಿದೆ.

ಘಟನೆ ಕುರಿತು ಮಾಹಿತಿ ಪಡೆದ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಅಪಘಾತಕ್ಕೆ ನಿಖರ ಕಾರಣ ಹಾಗೂ ಮೃತರ ಗುರುತು ಪತ್ತೆ ಹಚ್ಚುವ ಕಾರ್ಯ ಮುಂದುವರಿದಿದೆ.

## ಹಸುಗೂಸನ್ನು ಕೊಂದು ತಿಪ್ಪೆಯಲ್ಲಿ ಹುತ್ತಿಟ್ಟ ಅಜ್ಜಿ



**ಚಿಕ್ಕಮಗಳೂರು**: ಮದುವೆಗೂಮುನ್ನವೇ ಸ್ಟಾಫ್ ನರ್ಸ್‌ವೊಬ್ಬರು ತಾಯಿ ಆಗಿದ್ದಾರೆ. ಆದ್ರೆ, ಹೆರಿಗೆ ಆದ ಒಂದೇ ನಿಮಿಷದಲ್ಲಿ ಹಸುಗೂಸು ಸಾವನ್ನಪ್ಪಿರುವುದು ಹಲವು ಅನುಮಾನಗಳನ್ನು ಹುಟ್ಟುಹಾಕಿದೆ. ಹೌದು... ಚಿಕ್ಕಮಗಳೂರಿನ ತರೀಕೆರೆಯ ಬಾವಿಕೆರೆ ಗ್ರಾಮದ ಸ್ಟಾಫ್ ನರ್ಸ್ ಮದುವೆಗೂ ಮುನ್ನ ಮಗುವಿಗೆ ಜನ್ಮ ನೀಡಿದ್ದಾರೆ. ಆದ್ರೆ, ಮಗು ಮೃತಪಟ್ಟಿದ್ದು, ಸಮಾಜದ ಗೌರವಕ್ಕೆ ಅಂಜಿ ಕುಟುಂಬಸ್ಥರೇ ಹಸುಗೂಸನ್ನು ಕೊಲೆ ಮಾಡಿದ್ದಾರೆ ಎನ್ನುವ ಅನುಮಾನಗಳು ವ್ಯಕ್ತವಾಗಿವೆ. ಹೀಗಾಗಿ ಈ ಸಂಬಂಧ ಲಕ್ಕವಳ್ಳಿ ಠಾಣೆಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

**ಮನೆಯಲ್ಲೇ ಹೆರಿಗೆ ಮಾಡಿಸಿ ಕೊಂಡ ನರ್ಸ್**:ಸ್ಟಾಫ್ ನರ್ಸ್ ಆಗಿ ಕೆಲಸ ಮಾಡುತ್ತಿದ್ದ ಯುವತಿ, ಮದುವೆಗೆ ಮೊದಲೇ ಗರ್ಭಿಣಿಯಾಗಿದ್ದು, ಕುಟುಂಬದ ಗೌರವದ ದೃಷ್ಟಿಯಿಂದ ಈ ವಿಷಯವನ್ನು ಗುಟ್ಟಾಗಿಡಲಾಗಿತ್ತು. ಆದ್ರೆ, ಕಳೆದ 15 ದಿನಗಳ ಹಿಂದೆ ಮನೆಯಲ್ಲೇ ಯುವತಿಗೆ ಹೆರಿಗೆ ನೋವು ಕಾಣಿಸಿಕೊಂಡಿದ್ದು, ಆಸ್ಪತ್ರೆಗೆ ಹೋದರೆ ವಿಷಯ ಜಗಜ್ಜಾಹೀರಾಗುತ್ತದೆ ಎಂಬ ಭಯಕ್ಕೆ ನರ್ಸ್ ಆಗಿದ್ದ ಯುವತಿ, ತನ್ನ ತಂದೆ-ತಾಯಿ ಮತ್ತು ಅಜ್ಜಿಯ ಸಹಾಯದಿಂದ ಮನೆಯಲ್ಲೇ ಹೆರಿಗೆ ಮಾಡಿಸಿಕೊಂಡಿದ್ದಾಳೆ. ಆದ್ರೆ, ಹುಟ್ಟಿದ ಒಂದೇ ನಿಮಿಷದಲ್ಲೇ ಮಗು ಸಾವನ್ನಪ್ಪಿದೆ. ಹೀಗಾಗಿ ಮರ್ಯಾದೆ ಹೆದರಿ ಮಗುವನ್ನು ಕುಟುಂಬಸ್ಥರೇ ಉಸಿರುಗಟ್ಟಿಸಿ ಕೊಂದಿರಬಹುದು ಎಂದು ಶಂಕಿಸಲಾಗಿದೆ.

**ಮಗುವಿನ ಸಾವು ಬಯಲಿಗೆ ಬಂದಿದ್ದೇಗೆ?**

ಇನ್ನು ಮಗು ಸಾವನ್ನಪ್ಪಿದ ಬಳಿಕ ಮೃತದೇವನ್ನು ಬ್ಯಾಗ್‌ನಲ್ಲಿ ತುಂಬಿಕೊಂಡು ಹೋಗಿ, ಜನವಸತಿ ಇಲ್ಲದ ತಿಪ್ಪೆಯ ಗುಂಡಿಯೊಂದರಲ್ಲಿ ಹೂತು ಬಂದಿದ್ದಾರೆ. ಆದ್ರೆ, ಇದನ್ನು ತಿಪ್ಪೆ ಗುಂಡಿಯ ಪಕ್ಕದ ಮನೆಯ ಯುವಕ ನೋಡಿದ್ದು, ಏನೋ ಹೂತು ಹಾಕಿರುವ ಬಗ್ಗೆ ಯುವಕನಿಗೆ ಅನುಮಾನ ಮೂಡಿದೆ. ಬಳಿಕ ಯುವಕ ಪೊಲೀಸರಿಗೆ ಮಾಹಿತಿ ನೀಡಿದ್ದಾನೆ. ಈ ಮಾಹಿತಿ ಮೇರೆಗೆ ಕೂಡಲೇ ಲಕ್ಕವಳ್ಳಿ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದಾಗ ತಿಪ್ಪೆಯಲ್ಲಿ ಹೂತಿದ್ದ ಮಗುವಿನ ಮೃತದೇಹ ಪತ್ತೆಯಾಗಿದೆ.

**ಮರಣೋತ್ತರ ಪರೀಕ್ಷೆ ವರದಿಗಾಗಿ ಕಾಯುತ್ತಿರುವ ಪೊಲೀಸರು**

ಸದ್ಯ ಪೊಲೀಸರು ಹಸುಗೂಸಿನ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ರವಾನಿಸಲಾಗಿದ್ದು,ಮರಣೋತ್ತರ ಪರೀಕ್ಷೆ ವರದಿ ಬಳಿಕ ಮಗು ಸಹಜವಾಗಿಯೇ ಉಸಿರುಗಟ್ಟಿ ಸಾವನ್ನಪ್ಪಿದೆಯೋ ಅಥವಾ ಕುಟುಂಬಸ್ಥರೇ ಉಸಿರುಗಟ್ಟಿಸಿ ಕೊಂದಿದ್ದಾರೋ ಎನ್ನುವುದು ಗೊತ್ತಾಗಲಿದೆ. ಹೀಗಾಗಿ ಪೊಲೀಸರು ಮರಣೋತ್ತರ ಪರೀಕ್ಷೆಗಾಗಿ ಕಾಯುತ್ತಿದ್ದಾರೆ.

ಇನ್ನು ಅನುಮಾಸ್ಪದ ಸಾವು ಎಂದು ಪ್ರಕರಣ ದಾಖಲಸಿಕೊಂಡಿರುವ ಪೊಲೀಸರು, ಕುಟುಂಬಸ್ಥರನ್ನು ವಿಚಾರಣೆ ನಡೆಸಿದ್ದಾರೆ. ಆದ್ರೆ, ಇದುವರೆಗೂ ಯಾರನ್ನೂ ಬಂಧನ ಮಾಡಿಲ್ಲ. ಒಂದು ವೇಳೆ ವರದಿಯಲ್ಲಿ ಮಗುವನ್ನು ಕೊಲೆ ಮಾಡಲಾಗಿದೆ ಎಂದು ದೃಢವಾದರೆ ಕುಟುಂಬಸ್ಥರನ್ನು ಬಂಧಿಸಲಿದ್ದಾರೆ.

ಒಟ್ಟಿನಲ್ಲಿ ಮದುವೆಗೂ ಮುನ್ನವೇ ನರ್ಸ್ ತಾಯಿ ಆಗಿದ್ದು, ಅನಾಯಾಸವಾಗಿ ಕಣ್ಣು ಬಿಟ್ಟು ಪ್ರಪಂಚವನ್ನು ನೋಡುವ ಮೊದಲೇ ಮಗು ಮೃತಪಟ್ಟಿದ್ದು ದುರಂತ.



ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ
9538786812\8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

